ನ್ಯಾಯ ಪಂಚಾಯಿತಿ ಹಾಗೂ ಇತರೆ ಕಾನೂನುಗಳ (ತಿದ್ದುಪಡಿ) ವಿಧೇಯಕ :

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್‌ರಾಜ್ ಹಾಗೂ ಪಶುಸಂಗೋಪನಾ ಸಚಿವರು):–

ಮಾನ್ಯ ಅಧ್ಯಕ್ಷರೆ, "1990ನೇ ಕರ್ನಾಟಕ ಜಿಲ್ಲಾಪರಿಷತ್ತು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ ಪಂಚಾಯಿತಿ, ನ್ಯಾಯ ಪಂಚಾಯಿತಿ ಹಾಗೂ ಇತರೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ".

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ :

"1990ನೇ ಕರ್ನಾಟಕ ಜಿಲ್ಲಾಪರಿಷತ್ತು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ ಪಂಚಾಯಿತಿ, ನ್ಯಾಯ ಪಂಚಾಯಿತಿ ಹಾಗೂ ಇತರೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು, ಮಂಡಿಸಲು ಅನುಮತಿಯನ್ನು ನೀಡುವುದು."

ಪ್ರಸ್ತಾವ ಅಂಗೀಕೃತವಾಯಿತು ಮತ್ತು ಮಂಡನೆಗೆ ಅನುಮತಿಯನ್ನು ನೀಡಲಾಯಿತು.

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್‌ರಾಜ್ ಹಾಗೂ ಪಶುಸಂಗೋಪನಾ ಸಚಿವರು):–

ಮಾನ್ಯ ಅಧ್ಯಕ್ಷರೆ, "1990ನೇ ಕರ್ನಾಟಕ ಜಿಲ್ಲಾಪರಿಷತ್ತು, ತಾಲ್ಲೂಕು ಪಂಚಾಯಿತಿ ಸಮಿತಿಗಳು, ಮಂಡಲ ಪಂಚಾಯಿತಿ, ನ್ಯಾಯ ಪಂಚಾಯಿತಿ ಹಾಗೂ ಇತರೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು, ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲಾಗಿದೆ.

ಶ್ರೀ ಡಿ.ಬಿ. ಚಂದ್ರೇಗೌಡ:– ಈ ವಿಧೇಯಕವನ್ನು ನಾವು ಸ್ಪಷ್ಟವಾಗಿ ವಿರೋಧಿಸಬೇಕಾಗುತ್ತದೆ. ಈ ವಿಧೇಯಕದ ಚರ್ಚೆಗೆ ಮುನ್ನ ಸಾಕಷ್ಟು ಕಾಲಾವಕಾಶಬೇಕೆಂದು ನಾನು ತಮ್ಮಲ್ಲಿ ಪ್ರಾರ್ಥಿಸುತ್ತೇನೆ. ನಿಮಗೆ ಕಾಲಾವಕಾಶ ಕೊಡುವುದಕ್ಕೆ ಮನಸ್ಸಿಲ್ಲದಿದ್ದರೆ ನಾವು ಅದನ್ನು ವಿರೋಧಿಸಬೇಕಾಗುತ್ತದೆ. ಈ ವಿರೋಧವನ್ನು ನಾವು ಎಷ್ಟರಮಟ್ಟಿಗೆ ನಮ್ಮ ಶಕ್ತಿ ಇದೆಯೋ ಅಷ್ಟೂ ವಿರೋಧಿಸುತ್ತೇವೆ, ಈ ಶಾಸನ ಸಭೆಯಲ್ಲಿ ಈ ಮಸೂದೆಯ ಬಗ್ಗೆ ಮರುಪರಿಶೀಲನೆಗೆ ಈಗಲೂ ಕೂಡ ಅವಕಾಶ ಇಲ್ಲವೆಂದರೆ ಅನಿವಾರ್ಯವಾಗಿ ನಾವು ಧರಣಿ ಮಾಡಬೇಕಾಗುತ್ತದೆ. ಅದಕ್ಕೆ ಅವರೇ ಹೊಣೆಗಾರರು ಎಂದು ಕೂಡ ಹೇಳಬೇಕಾಗುತ್ತದೆ. *

(ಮಾನ್ಯ ವಿರೋಧ ಪಕ್ಷದ ಸದಸ್ಯರು ಧರಣಿಕೂರಲು ಆಗಮಿಸುತ್ತಿದ್ದರು)

ಅಧ್ಯಕ್ಷರು:– ಈಗ ಸಭೆಯನ್ನು 3–40 ರವರೆಗೆ ಮುಂದೂಡಲಾಗಿದೆ.

(ಸಭೆಯನ್ನು 2.40ಕ್ಕೆ ಮುಂದೂಡಲ್ಪಟ್ಟಿತು)

ಸದನವು ಮತ್ತೆ 4 ಗಂಟೆಗೆ ಸಮಾವೇಶಗೊಂಡಿತು.

(ಶ್ರೀಮತಿ ನಾಗಮ್ಮ ಕೇಶವಮೂರ್ತಿಯವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದರು)

(ಜನತಾದಳ ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ಧರಣಿ ಕುಳಿತು "ಕರಾಳ ಮಸೂದೆಗೆ ಧಿಕ್ಕಾರ" ಎಂಬ ಘೋಷಣೆ ಮಾಡುತ್ತಿದ್ದರು)

ಉಪಾಧ್ಯಕ್ಷರು:– ಮಾನ್ಯ ವಿರೋಧ ಪಕ್ಷದ ನಾಯಕರು ಮತ್ತು ಸದಸ್ಯರು ತಮ್ಮ ತಮ್ಮ ಸ್ಥಾನಗಳಿಗೆ ಹೋಗಿ ಸಭೆಯನ್ನು ನಡೆಸುವುದಕ್ಕೆ ಸಹಕಾರವನ್ನು ಕೊಡಬೇಕೆಂದು ನಾನು ಕೇಳಿಕೊಳ್ಳುತ್ತೇನೆ.